# ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ಧಾರವಾಡ

ಸಂಖ್ಯೆ: ಜಿ1(2)/ಶಾಶಿಅ/ಹೊಪ್ರೌಶಾ ಆಂಗ್ಲ/ಅನು 08/2005-06 ದಿನಾಂಕ: 13-05-2005

ನಮೂನೆ-2

(ನಿಯಮ 3 ಉಪನಿಯಮ 5 (ಬಿ))

ಪ್ರೇರಣಾ ಟ್ರಸ್ಟ್, ಶಿವಯೋಗಿ ನಗರ, ಆಶ್ರಮ ರಸ್ತೆ ಬಿಜಾಪುರ ಇವರ ಗವರ್ನಿಂಗ್ ಕೌನ್ಸಿಲನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ 1-1995) ಸೆಕ್ಷನ್ 31 ರಂತೆ ಈ ದಿನ 10-05-2005 ರಂದು ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ನಡೆಸಲು ನೊಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | | | |
|---|---|---|---|---|
| 1. ಕ್ರಮ ಸಂಖ್ಯೆ: | | ೨೨/೧೨/2005-2006 | | |
| 2. ಪ್ರೌಢ ಶಾಲೆಯ ಹೆಸರು : | – | ಪ್ರೇರಣಾ ಟ್ರಸ್ಟ್, ಆಂಗ್ಲ ಮಾಧ್ಯಮ ಪ್ರೌಢಶಾಲೆ, ಶಿವಯೋಗಿ ನಗರ, ಆಶ್ರಮ ರಸ್ತೆ ಬಿಜಾಪುರ | | |
| 3. ಅನುಮತಿ ನೀಡಿದ ತರಗತಿ | – | 8 ನೇ ತರಗತಿ | | |
| 4. ಪ್ರಾರಂಭಿಸ ಬೇಕಾದ ತರಗತಿಗಳು | – | 8ನೇ ತರಗತಿ | 9ನೇತರಗತಿ | 10ನೇತರಗತಿ |
| ಹಾಗೂ ಶೈಕ್ಷಣಿಕ ವರ್ಷ | – | 2005-06, | 2006-07, | 2007-08 |
| 5. ಅನುಮತಿ ನೀಡಿದ ಮಾಧ್ಯಮ | – | 8ನೇ ತರಗತಿ ಆಂಗ್ಲ ಮಾಧ್ಯಮ | | |
| ಶುಲ್ಕ ಪಾವತಿ ಮಾಡಿರುವುದು | – | ರೂ.10,000-00 ಪಾವತಿ ಮಾಡಿರುತ್ತಾರೆ. | | |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ: ೨೨/೧೨ /05-06 ಪುಟ ಸಂಖ್ಯೆ: 10 ವಾಲ್ಯೂಮ ಸಂಖ್ಯೆ: 1 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೊಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ.

ಈ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ.

1 ಈ ನೊಂದಾವಣೆಯು ನಿಯಮ 3(5)(4) ಕ್ಕೆ ಒಳಪಟ್ಟಿರುತ್ತದೆ.

2. ಗವರ್ನಿಂಗ್ ಕೌನ್ಸಿಲ್ ಇವರು ನಿಯಮ 4(4) ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

3. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪಾಠ, ಪೀಠೋಪಕರಣಗಳು, ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು, , ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

4. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.

5. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

6. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು.

7. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 (ಕರ್ನಾಟಕ ಆಕ್ಟ ಸಂಖ್ಯೆ: 1:95) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೆ ಪಾಲಿಸತಕ್ಕದ್ದು.

8. ಈ ಪ್ರೌಢಶಾಲಾ ನೊಂದಣಿಯಂತೆ ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ175:ಪಿ.ಎಂ.ಸಿ:95, ದಿನಾಂಕ: 7-9-98 ಮತ್ತು ದಿನಾಂಕ: 29-12-98 ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ.20-00 ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.

9. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ, ಸೇವಾ ಷರತ್ತು ಮತ್ತು ನಿಬಂಧನೆಗಳು) ನಿಯಮ 1999 ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

10. ಇಲಾಖೆ ಹಾಗೂ ಸರ್ಕಾರ ನಿಗದಿ ಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸತಕ್ಕದ್ದು.

11. ಶಾಲೆ ಪ್ರಾರಂಭಿಸಿದ ಎರಡು ತಿಂಗಳ ಅವಧಿಯೊಳಗೆ ಪ್ರಥಮ ಮಾನ್ಯತೆಗೆ ಸಂಬಂಧಿಸಿದ ಉಪನಿರ್ದೇಶಕರಿಗೆ ಸಲ್ಲಿಸತಕ್ಕದ್ದು.

12. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಇರತಕ್ಕದ್ದು. ಪ್ರತಿ ತರಗತಿಯಲ್ಲಿ ಕನಿಷ್ಠ ದಾಖಲಾತಿ 30 ಹಾಗೂ ಗರಿಷ್ಠ ದಾಖಲಾತಿ 60 ಮತ್ತು ಹಾಜರಾತಿ ಕನಿಷ್ಠ 25 ಇರತಕ್ಕದ್ದು.

13. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.

14. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8 ರ ಅಡಿಯಲ್ಲಿ ಉಪಬಂಧ 36–39 ರಂತೆ ನೊಂದಾಯಿಸಿದ ಎಲ್ಲ ಶಾಲೆಗಳು ರೆಗ್ಯೂಲೇಷನ್ ಹಾಗೂ ಪ್ರಾವಿಜನಲ್ ರೆಗ್ಯೂಲೇಷನ್ ವ್ಯಾಪ್ತಿಗೆ ಬರುವುದು.

15. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

16. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ವಿಭಾಗೀಯ ಉಪನಿರ್ದೇಶಕರು ಹಾಗೂ ಆಡಳಿತ ಮಂಡಳಿ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.

17. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು ಆಟದ ಮೈದಾನ ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ ನೊಂದಣಿಯನ್ನು ರದ್ದುಗೊಳಿಸಲಾಗುವುದು.

18. ಶಾಲಾ ಕೆಲಸದ ವೇಳೆ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.

19. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೊಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ ಎರಡು ತಿಂಗಳ ಒಳಗಾಗಿ ಈ ಕಚೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗಿ ರದ್ದಾಗುವುದು.

20. ಶಾಲೆಯು ಸಹ ಶಿಕ್ಷಣದಲ್ಲಿ ಮಂಜೂರಾಗಿದ್ದರಿಂದ ಕಡ್ಡಾಯವಾಗಿ ಗಂಡುಮಕ್ಕಳ ಹಾಗೂ ಹೆಣ್ಣುಮಕ್ಕಳ ಪ್ರತ್ಯೇಕ ಶೌಚಾಲಯದ ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಬೇಕು.

21. ಶಾಲೆಯಲ್ಲಿ ನೇಮಕ ಮಾಡಿಕೊಳ್ಳುವ ಪ್ರತಿಯೊಬ್ಬ ಬೋಧಕ / ಬೋಧಕೇತರ ಸಿಬ್ಬಂದಿಗೂ ಕರ್ನಾಟಕ ನಾಗರಿಕ ಸೇವಾ ನಿಯಮದ ಪ್ರಕಾರ ಸೇವಾ ಪುಸ್ತಕ ತೆರೆದು ಅದರಲ್ಲಿ ಅವರ ಸೇವಾ ವಿವರಗಳನ್ನು ನಿಯಮಾನುಸಾರ ದಾಖಲಿಸಿ ನಿರ್ವಹಿಸುವುದು.

ಸ್ಥಳ: ಧಾರವಾಡ
ದಿನಾಂಕ: 13–05–2005

(ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ಸಹನಿರ್ದೇಶಕರು(ಆಡಳಿತ)
ಆಯುಕ್ತರ ಕಚೇರಿ
ಸಾರ್ವಜನಿಕ ಶಿಕ್ಷಣ ಇಲಾಖೆ
ಧಾರವಾಡ

ಗೆ,
ಕಾರ್ಯದರ್ಶಿಗಳು,
ಪ್ರೇರಣಾ ಟ್ರಸ್ಟ್, ಆಂಗ್ಲ ಮಾಧ್ಯಮ ಪ್ರೌಢಶಾಲೆ, ಶಿವಯೋಗಿ ನಗರ, ಆಶ್ರಮ ರಸ್ತೆ ಬಿಜಾಪುರ

1. ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು–1 ಇವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ ಬಿಜಾಪುರ
3. ಸಹನಿರ್ದೇಶಕರು, ಸಾ.ಶಿ.ಇ. ಬೆಳಗಾಂವ ವಿಭಾಗ, ಬೆಳಗಾಂವ
4. ಉಪನಿರ್ದೇಶಕರು, ಸಾ.ಶಿ.ಇ. ಬಿಜಾಪುರ
5. ಕ್ಷೇತ್ರ ಶಿಕ್ಷಣಾಧಿಕಾರಿಗಳು, ನಗರ ವಲಯ ಬಿಜಾಪುರ
6. ಕಚೇರಿ ಪ್ರತಿ

C:\Documents and Settings\CPI2\My Documents\GIA-SEC\G1(2)-HAVNOOR\632_05.doc